# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ:08.04.2022 ರಂದು ಬೆಳಿಗ್ಗೆ: 11:00 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೇಗೂರು ವಾರ್ಡ್ ಸಂಖ್ಯೆ-192 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಚಲುವರಾಜು.ಎಸ್. ಕಿರಿಯ ಅಭಿಯಂತರರು, ವಾರ್ಡ್ ಸಂಖ್ಯೆ-192 ಬೇಗೂರು ರವರು ಸಭೆಗೆ ಹಾಜರಾಗಿದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ಕೋವಿಡ್-19 ಮಹಾಮಾರಿ ಸಾಂಕ್ರಮಿಕ ರೋಗ ಹರಡದಂತೆ ಮುಂಜಾಗ್ರತವಾಗಿ ತೆಗೆದುಕೊಳ್ಳಬಹುದಾದ ಕ್ರಮಗಳು.
2. ವಿಪತ್ತು ನಿರ್ವಹಣಾ ಸಮಿತಿ (Disaster Management Committee) ನಿರ್ವಹಿಸಬೇಕಾದ ಕ್ರಮಗಳ ಕುರಿತು.
3. ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.
4. ವಾರ್ಡಿನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು.
5. ಮುಂಗಾರು ಮಳೆಯಿಂದ ಸಂಭವಿಸಿದ/ಸಂಭವಿಸಬಹುದಾದ ಅನಾಹುತಗಳ ಕುರಿತು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು.

**ವಾರ್ಡ್ ನಂ 192 ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದವರು**

| ಕ್ರ.ಸಂ | ಹೆಸರು | ಹುದ್ದೆ | |
|---|---|---|---|
| 1 | ಶ್ರೀ.ನೀಲಕಂಠಯ್ಯ.ಕೆ.ಪಿ. | ಅಧ್ಯಕ್ಷರು/ನೋಡೆಲ್ ಅಧಿಕಾರಿಗಳು | 9845989978 |
| 2 | ಶ್ರೀ.ಚಲುವರಾಜು.ಎಸ್. | ಕಾರ್ಯದರ್ಶಿ (ಕಿ.ಅ.) | 9620687103 |
| 3 | ಶ್ರೀ.ಆರ್.ಕುಮಾರ್ | ಬೆಸ್ಕಾಂ. ಸ.ಕಾ.ಅ. | 9449844670 |
| 4 | ಶ್ರೀಮತಿ.ವಿನಯಕುಮಾರಿ | ಸ.ಕಾ.ಅ. ಬಿ.ಡಬ್ಲ್ಯೂ.ಎಸ್.ಎಸ್.ಬಿ | 9686566945 |
| 5 | ಶ್ರೀ.ರಮೇಶ್ | ಸ.ಕಾ.ಅ. ಬೀದಿ ದೀಪ ಇಲಾಖೆ | 9986835425 |
| 6 | ಶ್ರೀ.ಸಂತೋಷ್ ದೀಪು | ಅರಣ್ಯ | 8884324927 |
| 7 | ಶ್ರೀ.ರಮೇಶ್.ಎಲ್. | ಕಿ.ಆ.ಪ. | 9902785690 |
| 8 | ಶ್ರೀ.ಶ್ರೀಧರ್.ಎಸ್. | ಹಿ.ಆ.ಪ | 9739453414 |
| 9 | ಶ್ರೀ.ರಾಜೇಂದ್ರ ರೆಡ್ಡಿ | ಸದಸ್ಯರು | 9986490283 |
| 10 | ಶ್ರೀ.ಮಂಜುನಾಥ | ಸದಸ್ಯರು | 9845680018 |
| 11 | ಶ್ರೀ.ರಮೇಶ್ | ಸದಸ್ಯರು | 9035515888 |

# ಸಭೆಯ ನಡವಳಿಗಳು

1. ಪ್ರಪ್ರಥಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ರೋಗದ ಬಗ್ಗೆ ಹಾಗೂ ಸಾಮಾಜಿಕ ಅಂತರ ಕಾಪಾಡಿಕೊಳ್ಳುವ ಬಗ್ಗೆ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ಚರ್ಚಿಸಿದರು.

2. ವಾರ್ಡ್ ವ್ಯಾಪ್ತಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ಸುರಿಯುವ ಬಾರಿ ಮಳೆಯಿಂದಾಗಿ ಸಂಭವಿಸಬಹುದಾದ ಅನಾಹುತಗಳನ್ನು ತಪ್ಪಿಸಲು ಕ್ರಮ ಕೈಗೊಳ್ಳಲು ಮತ್ತು ಕಂಟ್ರೋಲ್ ರೂಂ ತೆರೆಯಲು ಸಭೆಯಲ್ಲಿ ಉಪಸ್ಥಿತರಿದ್ದ ಸಹಾಯಕ ಅಭಿಯಂತರರಿಗೆ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.

3. ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ಡಾ//ಅಂಬೇಡ್ಕರ್ ಜಯಂತಿ ಆಚರಿಸಲು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಶುಭಕೋರಿದರು.

4. ವಾರ್ಡ್ ವ್ಯಾಪ್ತಿಯಲ್ಲಿ ಕಸದ ಸಮಸ್ಯೆಯನ್ನು ಬಗ್ಗೆ ಹರಿಸಲು ಸಾರ್ವಜನಿಕರಿಗೆ ಹಸಿ ಕಸ ಮತ್ತು ಒಣ ತ್ಯಾಜ್ಯ ಬೇರ್ಪಡಿಸುವ ಬಗ್ಗೆ ಆಟೋಗಳನ್ನು ಬಳಸಿ ಮೈಕ್ ಮುಖಾಂತರ ಅರಿವು ಮೂಡಿಸುವುದು ಹಾಗೂ ಈ ಬಗ್ಗೆ ಸೂಕ್ತ ಕ್ರಮವಹಿಸುವಂತೆ ಸಭೆಯಲ್ಲಿ ಉಪಸ್ಥಿತರಿದ್ದ ಆರೋಗ್ಯ ಪರೀವೀಕ್ಷಕರಿಗೆ ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಸೂಚಿಸಿದರು.

5. ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ನೀಲಕಂಠಯ್ಯ.ಕೆ.ಪಿ. ಸಹಾಯಕ ಕಾರ್ಯಪಾಲಕ ಅಭಿಯಂತರರು ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳಿಗೆ ಚರಂಡಿಯಲ್ಲಿ ತುಂಬಿರುವ ಹೂಳನ್ನು ತೆಗೆದು ಚರಂಡಿಯಲ್ಲಿ ನೀರು ಸರಾಗವಾಗಿ ಹರಿಯುವಂತೆ ಮಾಡಲು ಹಾಗೂ ಸಾರ್ವಜನಿಕರ ಮತ್ತು ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ಸೂಚಿಸಿದರು.

6. ಸದರಿ ವಾರ್ಡ್‌ನಲ್ಲಿ ಅನೀರೀಕ್ಷಿತ ಮಳೆಯಾಗುತ್ತಿರುವುದರಿಂದ ತೊಂದರೆಯಲ್ಲಿರುವ ಸಾರ್ವಜನಿಕರಿಗೆ ಸಹಾಯ ಮಾಡಲು ಸಮಿತಿ ರೂಪಿಸಿ ಸಾರ್ವಜನಿಕರ ಕುಂದು ಕೊರತೆಗಳನ್ನು ಪರಿಶೀಲಿಸಿ ಪರಿಹರಿಸಿ ಕೊಡಲು ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು ಸೂಚಿಸಿದರು.

7. ಸದರಿ ವಾರ್ಡ್‌ನಲ್ಲಿ ತುರ್ತು ನಿಯಂತ್ರಣಾ ಕೊಠಡಿ ಸ್ಥಾಪಿಸಲು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ವಾರ್ಡ್‌ನ ಸಹಾಯಕ ಅಭಿಯಂತರರು ರವರಿಗೆ ಸೂಚಿಸಿದರು.

8. ಸದರಿ ವಾರ್ಡ್‌ನ ಈಸ್ಟ್ ಇಂಡಿಯಾ ಕಂಪನಿ, ನೋಬೋ ರೆಸಿಡೆನ್ಸಿಯಲ್ಲಿ ಬೀದಿ ದೀಪದ ವ್ಯವಸ್ಥೆಯನ್ನು ಕಲ್ಪಿಸಲು ಸಭೆಯಲ್ಲಿ ಹಾಜರಾಗಿದ್ದಂತಹ ಸದರಿ ಬಡಾವಣೆಯ ಸಾರ್ವಜನಿಕರು ಕೋರಿದ್ದು ಈ ಬಗ್ಗೆ ಕ್ರಮವಹಿಸುವಂತೆ ಮಾನ್ಯ ಸಮಿತಿ ಅಧ್ಯಕ್ಷರು ಸೂಚಿಸಿದರು.

<u>ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.</u>

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -192 ಬೇಗೂರು

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ-192, ಬೇಗೂರು

**ಪ್ರತಿಗಳು:-**

1) ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಆವಗಾಹನೆಗೆ ಮಂಡಿಸಿದೆ.
2) ಉಪ ಆಯುಕ್ತರು (ಬೊಮ್ಮನಹಳ್ಳಿ) ವಲಯ ರವರ ಆವಗಾಹನೆಗೆ ಮಂಡಿಸಿದೆ
3) ಸಹಾಯಕ ಕಂದಾಯ ಅಧಿಕಾರಿ (ಬೇಗೂರು) ಉಪವಿಭಾಗ ರವರ ಅವಗಾಹನೆಗೆ ಮಂಡಿಸಿದೆ
4) ವಾರ್ಡ್ ಸಮಿತಿ ಸದಸ್ಯರು ರವರಿಗೆ ಕಳುಹಿಸಲಾಗಿದೆ.
5) ಕಛೇರಿ ಕಡತಕ್ಕೆ